ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ. 599/2021

ಸಿ.ಡಬ್ಲ್ಯೂ-1, ಪಿ.ಡಬ್ಲ್ಯೂ-,1

ದಿ:**17.02.2026** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿಯ ಹೆಸರು | ರವಿ |
| ಗಂಡ/ತಂದೆಯ ಹೆಸರು | ಚೆಲುವೇಗೌಡ |
| ವಯಸ್ಸು | 46 ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ಹುಳಿಯಾಳು |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:**

ನಮ್ಮ ಮನೆಯಲ್ಲಿ 10 ಗ್ರಾಂ ತೂಕದ ಬ್ರೇಸ್ ಲೆಟ್ ಹಾಗೂ ರೂ.8000 ಕಳ್ಳತನವಾಗಿತ್ತು. ಈ ಬಗ್ಗೆ ನಾನು ಪೊಲೀಸರಿಗೆ ಮೌಖಿಕವಾಗಿ ತಿಳಿಸಿದ್ದೆ. ಆ ಸಮಯದಲ್ಲಿ ಪೊಲೀಸರು ಈಗ ತೋರಿಸುತ್ತಿರುವ ಎರಡು ಬರವಣಿಗೆಗಳ ಮೇಲೆ ನನ್ನ ಸಹಿಯನ್ನು ಪಡೆದಿರುತ್ತಾರೆ. ಸಾಕ್ಷಿ ತನ್ನ ಸಹಿ ಇರುವ ಎರಡು ಬರವಣಿಗೆಗಳನ್ನು ನೋಡಿ ಗುರುತಿಸಿದ್ದು, ಅವುಗಳು ದೂರು ಮತ್ತು ಮಹಜರ್ ಆಗಿದ್ದು ದೂರನ್ನು **ನಿಪಿ-1** ಅದರ ಮೇಲಿರುವ ಸಾಕ್ಷಿಯ ಸಹಿಯನ್ನು **1(ಎ)** ಮತ್ತು ಮಹಜರ್ ಅನ್ನು **ನಿಪಿ2** ಹಾಗೂ ಅದರ ಮೇಲಿರುವ ಸಾಕ್ಷಿ ಸಹಿಯನ್ನು **2(ಎ)** ಎಂದು ಗುರುತಿಸಲಾಯಿತು. ನಿಪಿ-1 ಮತ್ತು 2 ರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿಲ್ಲ. ನಾನು ಪೊಲೀಸರ ಸಮಕ್ಷಮ ಯಾವುದೇ ಮರು ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ ರವರಿಂದ**

ದಿ:03.10.2019 ರಂದು ಮನೆಯಲ್ಲಿ ಯಾರೂ ಇಲ್ಲದ ಸಮಯದಲ್ಲಿ ಆರೋಪಿ ನಮ್ಮ ಮನೆಯ ಬಾಗಿಲಿಗೆ ಹಾಕಿದ್ದ ಬೀಗವನ್ನು ಕಬ್ಬಿಣದ ರಾಡಿನಿಂದ ಹೊಡೆದು ಮನೆಯೊಳಗೆ ಪ್ರವೇಶಿಸಿದನು ಎಂದರೆ ಸರಿಯಲ್ಲ ಹಾಗೂ ಮನೆಯ ಮಲಗುವ ಕೋಣೆಯೊಳಗಿದ್ದ ಬೀರುವಿನ ಬಾಗಿಲನ್ನು ತೆಗೆದು ಅದರಲ್ಲಿದ್ದ 10 ಗ್ರಾಂ ತೂಕದ ಚಿನ್ನದ ಬ್ರೇಸ್ ಲೆಟ್ ಹಾಗೂ ರೂ.8000 ಗಳನ್ನು ಕಳ್ಳತನ ಮಾಡಿರುತ್ತಾನೆ ಎಂದರೆ ಸರಿಯಲ್ಲ. ನಾನು ಕಳೆದು ಹೋದ ಬ್ರೆಸ್ ಲೆಟ್ ಅನ್ನು ಬ್ರೆಸ್ ಲೆಟನ್ನು ಪಡೆದಿರುತ್ತೇನೆ. ಈಗ ಓದಿ ಹೇಳಿದಂತೆ ಪೊಲೀಸರ ಮುಂದೆ ದೂರನ್ನು ನೀಡಿದ್ದೇನೆಂದರೆ ಸರಿಯಲ್ಲ.

ದಿಃ 04.10.2019 ರಂದು ಮಧ್ಯಾಹ್ನ 12 ರಿಂದ 1 ಗಂಟೆ ಸಮಯದಲ್ಲಿ ಪೊಲೀಸರು ಘಟನಾ ಸ್ಥಳಕ್ಕೆ ಬಂದಿದ್ದು, ಅಲ್ಲಿ ನಾನು ಹಾಜರಿದ್ದು, ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ ಚಾಸಾ-2 ಮತ್ತು 3 ರವರ ಸಮಕ್ಷಮ ನಿಪಿ-2 ರಂತೆ ಸ್ಥಳ ಮಹಜರ್ ಜರುಗಿಸಿದ್ದರು ಎಂದರೆ ಸರಿಯಲ್ಲ. ನಿಪಿ-2 ಕ್ಕೆ ಅಲ್ಲಿಯೇ ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ. ನಿಪಿ2 ನ್ನು ಜರುಗಿಸಿ ಸ್ಥಳದಿಂದ ಒಂದು ಕಬ್ಬಿಣದ ರಾಡು ಹಾಗೂ ಸ್ಟೀಲ್ ಬೀಗವನ್ನು ಅಮಾನತ್ತುಪಡಿಸಿಕೊಂಡರು ಎಂದರೆ ಸರಿಯಲ್ಲ.

ದಿಃ06.06.2020 ರಂದು ಪೊಲೀಸರ ಸಮಕ್ಷಮ ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆ ಭಾಗವನ್ನು ನಿಪಿ3 ಎಂದು ಗುರುತಿಸಲಾಯಿತು.

ಈಗ ಕಳ್ಳತನವಾಗಿರುವ ಬ್ರೆಸ್ ಲೆಟ್ ನನ್ನ ವಶದಲ್ಲಿದೆ ಎಂದರೆ ಸರಿ. ಆರೋಪಿಯೊಂದಿಗೆ ರಾಜಿ ಮಾಡಿಕೊಂಡಿದ್ದೇನೆ ಎಂದರೆ ಸರಿ. ಆ ಕಾರಣಕ್ಕಾಗಿ ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀಸವಾಲು ಆರೋಪಿ ಪರ ವಕೀಲರಿಂದಃ

ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.